17. ಊದಲು

ಇದು ಅಲ್ಪಾವಧಿ ಬೆಳೆಯಾಗಿದ್ದು, ರೋಗ ಮತ್ತು ಕೀಟ ನಿರೋಧಕ ಶಕ್ತಿ ಹೊಂದಿದೆ. ಮಳೆಯಾಶ್ರಿತ ಪ್ರದೇಶಗಳಲ್ಲಿ ಕಡಿಮೆ ಆಳದ, ಕಡಿಮೆ ಫಲವತ್ತತೆಯುಳ್ಳ ಮಣ್ಣಿನಲ್ಲೂ ಸಹ ಬೆಳೆಯಬಹುದು. ಎಲ್ಲಾ ಕಿರುಧಾನ್ಯಗಳ ಹಾಗೆ ಈ ಧಾನ್ಯವು ಕೂಡ ಬರನಿರೋಧಕ ಹಾಗೂ ಪೌಷ್ಠಿಕಾಂಶಭರಿತ ಆಹಾರವಾಗಿದೆ.

ತಳಿಗಳು ಮತ್ತು ವಿಶೇಷ ಗುಣಗಳು

ತಳಿಗಳು	*ಬಿತ್ತನೆ ಕಾಲ*	*ಕಾಲಾವಧಿ (ದಿನಗಳು)*	*ಇಳುವರಿ (ಕ್ವಿಂ/ಎ)*	*ವಿಶೇಷ ಗುಣಗಳು*
ಡಿ.ಹೆಚ್.ಬಿ.ಎಂ.–93–3	ಮೇ–ಜುಲೈ	90–95	ಧಾನ್ಯ: 9–10 ಮೇವು: 1.5–2 ಟನ್	ರಸಾಯನಿಕ ಗೊಬ್ಬರಗಳಿಗೆ ಹೆಚ್ಚಾಗಿ ಸ್ಪಂದಿಸುವ ಗುಣವನ್ನು ಹೊಂದಿದೆ. ತೆನೆ ಮತ್ತು ಕಾಳು ಕಾಡಿಗೆ ರೋಗಕ್ಕೆ ನಿರೋಧಕತೆಯನ್ನು ಹೊಂದಿದೆ.

ಬೇಸಾಯಕ್ಕೆ ಬೇಕಾಗುವ ಸಾಮಗ್ರಿಗಳು (ಎಕರೆಗೆ)

ಸಾಮಗ್ರಿಗಳು	*ಪ್ರಮಾಣ*
ಬಿತ್ತನೆ ಬೀಜ (ಕಿ.ಗ್ರಾಂ)	3–4
ಕೊಟ್ಟಿಗೆ ಗೊಬ್ಬರ ಅಥವಾ ಕಾಂಪೋಸ್ಟ್ (ಟನ್)	2.5
ರಸಾಯನಿಕ ಗೊಬ್ಬರಗಳು (ಕಿ.ಗ್ರಾಂ)	
ಸಾರಜನಕ	8
ರಂಜಕ	8

ಬಿತ್ತನೆ ಮತ್ತು ಬೇಸಾಯ:

- ಬಿತ್ತನೆಗೆ 3–4 ವಾರಗಳ ಮುಂಚೆ ಕೊಟ್ಟಿಗೆ ಗೊಬ್ಬರವನ್ನು ಮಣ್ಣಿನಲ್ಲಿ ಸೇರಿಸುವುದು.
- ಬಿತ್ತನೆ ಬೀಜವನ್ನು ಸಾಲಿನಿಂದ ಸಾಲಿಗೆ 12 ಅಂಗುಲ, ಗಿಡದಿಂದ ಗಿಡಕ್ಕೆ 3–4 ಅಂಗುಲ ಅಂತರದ ಸಾಲುಗಳಲ್ಲಿ 2 ಅಂಗುಲಕ್ಕಿಂತ ಹೆಚ್ಚು ಆಳವಿಲ್ಲದಂತೆ ಬಿತ್ತುವುದು.
- ಶಿಫಾರಸ್ಸು ಮಾಡಿದ ರಸಗೊಬ್ಬರಗಳಾದ ಸಾರಜನಕ ಮತ್ತು ರಂಜಕವನ್ನು ಬಿತ್ತನೆ ಸಮಯದಲ್ಲಿ ಕೊಡುವುದು.
- ಕಳೆ ನಿರ್ವಹಣೆಗಾಗಿ 2–3 ಬಾರಿ ಅಂತರ ಬೇಸಾಯ ಮಾಡುವುದು ಹಾಗು ಬಿತ್ತನೆಯಾದ 30 ದಿನಗಳ ನಂತರ ಒಂದು ಬಾರಿ ಕೈಯಿಂದ ಕಳೆ ತೆಗೆಯುವುದು.

ಸಸ್ಯ ಸಂರಕ್ಷಣೆ : ತಡವಾಗಿ ಬಿತ್ತನೆ ಮಾಡಿದ ಬೆಳೆಗೆ ಸುಳಿ ನೊಣದ ಬಾಧೆ ಕಾಣಿಸಿಕೊಳ್ಳುತ್ತದೆ. ಮುಂಗಾರಿನ ಪ್ರಾರಂಭದಲ್ಲೇ ಬಿತ್ತನೆ ಮಾಡುವುದರಿಂದ ಈ ಕೀಟದ ಬಾಧೆಯನ್ನು ತಡೆಗಟ್ಟಬಹುದು.

ಮುಖ್ಯವಾದ ಕಡಿಮೆ ಖರ್ಚಿನ ಬೇಸಾಯ ಕ್ರಮಗಳು

- ಕೂರಿಗೆ ಸಹಾಯದಿಂದ ಸಾಲಿನಲ್ಲಿ ಬಿತ್ತನೆ ಮಾಡುವುದು.
- ಬೀಜವನ್ನು ಶಿಫಾರಸ್ಸು ಮಾಡಿದ ಅಂತರದಲ್ಲಿ ಬಿತ್ತುವುದು.